| | | | |
|---|---|---|---|
| 11 | ಆಕಸ್ಮಿಕವಾಗಿ ಮನೆಗೆ ಬೆಂಕಿ ಬಿದ್ದು ಹಾನಿಯಾಗಿರುವುದಕ್ಕೆ ಪರಿಹಾರ ಕೋರಿ ಅರ್ಜಿ | ಚನ್ನರಾಯಪಟ್ಟಣ ತಾಲ್ಲೂಕು ತಾವರಕೆರೆ ಗ್ರಾಮನಿವಾಸಿಯಾದ ಗಣೇಶ್ ಬಿನ್ ನಿಂಗಪ್ಪ ಎಂಬುವವರ ಮನೆಗೆ ದಿ: 15-11-2012ರಂದು ರಾತ್ರಿ ಸುಮಾರು 7.30ಗಂಟೆಗೆ ಬೆಂಕಿ ಬಿದ್ದು, ಎಮ್ಮೆ, ಕುರಿ, ಆಡು, ಕೋಳಿಗಳು, ರಾಗಿ, ಬತ್ತ, ದಿನಬಳಕೆ ದಿನಸಿ ಸಾಮಾನುಗಳು, ಬಟ್ಟೆಗಳು, ಪಾತ್ರೆಗಳು ಕೊಬ್ಬರಿ, ಕಾಯಿ, ಮನೆಕಟ್ಟಲು ಶೇಖರಿಸಿದ್ದ ತೊಲೆಗಳು, ತೀರುಗಳು, ಬಾಗಿಲುಗಳು, ಕಿಟಕಿಗಳು, ತೆಂಗಿನಮರ, ಚಿನ್ನ ಬೆಳ್ಳಿ ಒಡವೆಗಳು, ನಗದು, ವಿದ್ಯಾಭ್ಯಾಸದ ದಾಖಲೆಗಳು ಸುಟ್ಟು ಹಾನಿಯಾಗಿದ್ದು, ಪರಿಹಾರವನ್ನು ನೀಡುವಂತೆ ಕೋರಿ ಮನವಿಯನ್ನು ಸಲ್ಲಿಸಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಚನ್ನರಾಯಪಟ್ಟಣ ತಾಲ್ಲೂಕು ತಾವರಕೆರೆ ಗ್ರಾಮನಿವಾಸಿಯಾದ ಗಣೇಶ್ ಬಿನ್ ನಿಂಗಪ್ಪ ಇವರ ಮನೆಗೆ ಎಮ್ಮೆ, ಕುರಿ, ಆಡು, ಕೋಳಿಗಳು, ರಾಗಿ, ಬತ್ತ, ದಿನಬಳಕೆ ದಿನಸಿ ಸಾಮಾನುಗಳು, ಬಟ್ಟೆಗಳು, ಪಾತ್ರೆಗಳು ಕೊಬ್ಬರಿ, ಕಾಯಿ, ಮನೆಕಟ್ಟಲು ಶೇಖರಿಸಿದ್ದ ತೊಲೆಗಳು, ತೀರುಗಳು, ಬಾಗಿಲುಗಳು, ಕಿಟಕಿಗಳು, ತೆಂಗಿನಮರ, ಚಿನ್ನ ಬೆಳ್ಳಿ ಒಡವೆಗಳು ನಗದು, ವಿದ್ಯಾಭ್ಯಾಸದ ದಾಖಲೆಗಳು ಸುಟ್ಟು ಹಾನಿಯಾಗಿರುವ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯಿತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಪರಿಹಾರಧನ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.<br>(ಕ್ರಮ: ಉಪ ಕಾರ್ಯದರ್ಶಿ (ಆಡಳಿತ), ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ) |
| | ಮತ್ಯಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನೆಲೆಯಲ್ಲಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | | |

(ಡಿ.ಜಿ.ಅಂಬಿಕ ರಾಮಣ್ಣ)
ಅಧ್ಯಕ್ಷರು
ಹಣಕಾಸು, ಲೆಕ್ಕಪರಿಶೋಧನೆ ಮತ್ತು
ಯೋಜನಾ ಸ್ಥಾಯಿ ಸಮಿತಿ,
ಜಿಲ್ಲಾ ಪಂಚಾಯಿತಿ, ಹಾಸನ.

| | | | |
|---|---|---|---|
| 8 | ಶ್ರೀ ಹೊಂಗ್ಯಮ್ಮ ದೇವಿಯ ದಸರಾ ಮಹೋತ್ಸವವನ್ನು ಆಚರಿಸಲು ಜಿಲ್ಲಾ ಪಂಚಾಯಿತಿಯಿಂದ ಧನಸಹಾಯ ಕೋರಿರುವ ಕುರಿತು. | ಸಂಖ್ಯೆ: ಅ(8)1866:ಝೆಡ್‌ಪಿಹೆಚ್-41/ಇತರೆ 2012 ದಿನಾಂಕ: 03-11-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ದಿನಾಂಕ: 25-10-2012ರಂದು ಅರಸೀಕೆರೆ ತಾಲ್ಲೂಕು, ಬೈರಾಂಬುದಿ ಗ್ರಾಮದ ಇತಿಹಾಸ ಪ್ರಸಿದ್ಧ ಶ್ರೀ ಹೊಂಗ್ಯಮ್ಮ ದೇವಿಯ ದಸರಾ ಮಹೋತ್ಸವ ಅಂಗವಾಗಿ ಜಾನಪದ ಕಾರ್ಯಕ್ರಮಗಳಾದ ತಮಟೆ ವಾದ್ಯ, ಸೋಮದೇವರ ಕುಣಿತ, ಸುಗಮ ಸಂಗೀತ ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಜಿಲ್ಲಾ ಪಂಚಾಯಿತಿಯಿಂದ ರೂ.10000/-ಗಳ ಧನಸಹಾಯ ನೀಡುವಂತೆ ಮಾನ್ಯ ಉಪಾಧ್ಯಕ್ಷರು ಜಿಲ್ಲಾ ಪಂಚಾಯಿತಿ, ಹಾಸನ ಇವರು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ದಿನಾಂಕ: 25-10-2012ರಂದು ಅರಸೀಕೆರೆ ತಾಲ್ಲೂಕು, ಬೈರಾಂಬುದಿ ಗ್ರಾಮದ ಇತಿಹಾಸ ಪ್ರಸಿದ್ಧ ಶ್ರೀ ಹೊಂಗ್ಯಮ್ಮ ದೇವಿಯ ದಸರಾ ಮಹೋತ್ಸವಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.<br>(ಕ್ರಮ: ಉಪ ಕಾರ್ಯದರ್ಶಿ (ಆಡಳಿತ), ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ) |
| 9 | ರಾಷ್ಟ್ರಮಟ್ಟದ ಹೊನಲು ಬೆಳಕಿನ ಟೆನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಯನ್ನು ಧನಸಹಾಯ ನೀಡುವ ಬಗ್ಗೆ. | ಸಂಖ್ಯೆ: ಅ(8)1866:ಝೆಡ್‌ಪಿಹೆಚ್-42/ಇತರೆ 2012 ದಿನಾಂಕ: 19-11-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ದಿನಾಂಕ: 23-11-2012ರಿಂದ 25-11-2012ರವರೆಗೆ ರಾಷ್ಟ್ರಮಟ್ಟದ ಹೊನಲು ಬೆಳಕಿನ ಟೆನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಯನ್ನು ಹಾಸನ ನಗರದ ಸರ್ಕಾರಿ ವಿಜ್ಞಾನ ಮತ್ತು ಕಲಾ ಕಾಲೇಜು ಮೈದಾನದಲ್ಲಿ ಆಯೋಜಿಸಿದ್ದು, ಸದರಿ ಪಂದ್ಯಾವಳಿಗೆ ನಮ್ಮ ರಾಜ್ಯದಿಂದ ಮತ್ತು ಇತರೆ ರಾಜ್ಯಗಳಿಂದ ಸುಮಾರು 30ಕ್ಕೂ ಹೆಚ್ಚು ತಂಡಗಳು ಭಾಗವಹಿಸುತ್ತಿದ್ದು ಸದರಿ ತಂಡಗಳ ಕ್ರೀಡಾ ಪಟುಗಳಿಗೆ ಊಟ ವಸತಿ ಮತ್ತು ವಿಜೇತ ತಂಡಗಳಿಗೆ ಬಹುಮಾನ ಸೇರಿದಂತೆ ಸುಮಾರು ರೂ.10.00ಲಕ್ಷಗಳ ಅಂದಾಜು ವೆಚ್ಚವಾಗಲಿದ್ದು, ಸದರಿ ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ಧನಸಹಾಯವನ್ನು ನೀಡುವಂತೆ ಅಧ್ಯಕ್ಷರು, ಹಾಸನಾಂಬ ಸ್ಪೋರ್ಟ್ಸ್ ಕ್ಲಬ್ (ರಿ) ಹಾಸನ ಇವರು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಅಧ್ಯಕ್ಷರು, ಹಾಸನಾಂಬ ಸ್ಪೋರ್ಟ್ಸ್ ಕ್ಲಬ್ (ರಿ) ಹಾಸನ ಇವರು ಕೋರಿರುವಂತೆ ದಿನಾಂಕ: 23-11-2012ರಿಂದ 25-11-2012ರವರೆಗೆ ರಾಷ್ಟ್ರಮಟ್ಟದ ಹೊನಲು ಬೆಳಕಿನ ಟೆನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಗೆ ಜಿಲ್ಲಾ ಪಂಚಾಯಿತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.<br>(ಕ್ರಮ: ಉಪ ಕಾರ್ಯದರ್ಶಿ (ಆಡಳಿತ), ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ) |
| 10 | ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಹಾಸನ ಜಿಲ್ಲಾ ಶಾಖೆಗೆ ವಾರ್ಷಿಕ ವಂತಿಕೆ ನೀಡುವ ಕುರಿತು. | ಸಂಖ್ಯೆ: ಅ(8)1866:ಝೆಡ್‌ಪಿಹೆಚ್-42/ಇತರೆ 2012 ದಿನಾಂಕ: 19-11-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯು ಕಳೆದ 150 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದು, ಹಾಸನ ಜಿಲ್ಲಾ ರೆಡ್‌ಕ್ರಾಸ್ ಶಾಖೆಯಲ್ಲಿ ಜಿಲ್ಲೆಯಲ್ಲಿ ರಕ್ತದಾನ ಶಿಬಿರ, ಯುವರೆಡ್‌ಕ್ರಾಸ್ ಘಟಕಗಳ ಸ್ಥಾಪನೆ, ಅಂಗವಿಕಲರಿಗೆ ವಿವಿಧ ಸೌಲಭ್ಯಗಳ ನೆರವು ದೊರಕಿಸುತ್ತಿದ್ದು, ಜಿಲ್ಲೆಯಲ್ಲಿ ರೆಡ್‌ಕ್ರಾಸ್ ಸೇವಾ ಸೌಲಭ್ಯಗಳನ್ನು ಮತ್ತಷ್ಟು ಚುರುಕುಗೊಳಿಸಲು ಸರ್ಕಾರದ ಸುತ್ತೋಲೆಯಂತೆ ವಾರ್ಷಿಕ ವಂತಿಕೆಯಾಗಿ ರೂ.25000/-ಗಳನ್ನು ಜಿಲ್ಲಾ ಪಂಚಾಯಿತಿ ವತಿಯಿಂದ ನೀಡುವಂತೆ ಅಧ್ಯಕ್ಷರು, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಹಾಸನ ಇವರು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಅಧ್ಯಕ್ಷರು, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಹಾಸನ ಇವರು ಕೋರಿರುವಂತೆ ರೆಡ್‌ಕ್ರಾಸ್ ಸೇವಾ ಸೌಲಭ್ಯಗಳನ್ನು ಮತ್ತಷ್ಟು ಚುರುಕುಗೊಳಿಸಲು ಜಿಲ್ಲಾ ಪಂಚಾಯಿತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.<br>(ಕ್ರಮ: ಉಪ ಕಾರ್ಯದರ್ಶಿ (ಆಡಳಿತ), ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ) |

| | | | |
|---|---|---|---|
| 5 | ಅಂತರರಾಷ್ಟ್ರೀಯ ಮಟ್ಟದ ನಾಟಕೋತ್ಸವ ನಡೆಸುವ ಬಗ್ಗೆ | ಟಿಪ್ಪಣಿ ಸಂಖ್ಯೆ: ಜಿಪಂಹಾ/ಅ(8) ವಂತಿಕೆ 69/2012-13 ದಿನಾಂಕ: 31-07-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಜನಮಿತ್ರ ಕನ್ನಡ ದಿನಪತ್ರಿಕೆ ಮತ್ತು ಹಾಸನದ ರಂಗಸಿರಿ ರಂಗಭೂಮಿ ತಂಡದ ಸಂಯುಕ್ತ ಆಶ್ರಯದಲ್ಲಿ ಐದು ದಿನಗಳ ಕಾಲ ನಾಟಕೋತ್ಸವವನ್ನು ದಿನಾಂಕ: 28-11-2012ರಿಂದ 02-12-2012ರವರೆಗೆ ಹಾಸನದ ಕಲಾಭವನದಲ್ಲಿ ಆಯೋಜಿಸಿದ್ದು, ಸದರಿ ನಾಟಕೋತ್ಸವದಲ್ಲಿ ಪಾಲ್ಗೊಳ್ಳಲು ದೇಶದ ಮೂಲೆ ಮೂಲೆಯಿಂದ 18 ಮಂದಿ ಕಲಾವಿದರು ಆಗಮಿಸುತ್ತಿದ್ದು, ಕಲಾವಿದರು ಬಂದು ಹೋಗುವ ವಿಮಾನ ಪ್ರಯಾಣ ವೆಚ್ಚ ಮತ್ತು ವಾಸ್ತವ್ಯ, ಸಾರಿಗೆ ಸೇರಿದಂತೆ ಅಂದಾಜು ರೂ.10.00ಲಕ್ಷಗಳು ವೆಚ್ಚವಾಗುತ್ತಿದ್ದು, ಜಿಲ್ಲಾಪಂಚಾಯಿತಿಯಿಂದ ಅನುದಾನವನ್ನು ಬಿಡುಗಡೆಗೊಳಿಸಿಕೊಡಬೇಕೆಂದು ಪ್ರಧಾನ ಸಂಪಾದಕರು, ಜನಮಿತ್ರ ದಿನಪತ್ರಿಕೆ, ಕೆ.ಆರ್.ಪುರಂ ಹಾಸನ ಇವರು ಕೋರಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಪ್ರಧಾನ ಸಂಪಾದಕರು, ಜನಮಿತ್ರ ದಿನಪತ್ರಿಕೆ ಹಾಸನ ಇವರು ಕೋರಿರುವಂತೆ ದಿನಾಂಕ: 28-11-2012ರಿಂದ 02-12-2012ರವರೆಗೆ ಕಲಾಭವನದಲ್ಲಿ ನಡೆಯುವ ನಾಟಕೋತ್ಸವಕ್ಕೆ ಜಿಲ್ಲಾ ಪಂಚಾಯಿತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.<br>(ಕ್ರಮ: ಉಪ ಕಾರ್ಯದರ್ಶಿ (ಆಡಳಿತ), ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ) |
| 6 | ದಕ್ಷಿಣ ವಲಯ ಕ್ರೀಡಾಕೂಟ ನಡೆಸಲು ಜಿಲ್ಲಾ ಪಂಚಾಯಿತಿ ಯಿಂದ ಧನಸಹಾಯ ನೀಡುವ ಬಗ್ಗೆ | ಟಿಪ್ಪಣಿ ಸಂಖ್ಯೆ: ಜಿಪಂಹಾ/ಅ(8) ವಂತಿಕೆ 95/2012-13 ದಿನಾಂಕ: 22-08-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಸರ್ಕಾರಿ ಪ್ರೌಢಶಾಲೆ, ಗವೇನಹಳ್ಳಿ, ಹಾಸನ ತಾಲ್ಲೂಕು, ಈ ಶಾಲೆಯ ವತಿಯಿಂದ ತಾಲ್ಲೂಕು ಮಟ್ಟದ ದಕ್ಷಿಣ ವಲಯ ಕ್ರೀಡಾಕೂಟವನ್ನು ದಿನಾಂಕ: 28-08-2012ರಿಂದ 29-08-2012ರವರೆಗೆ ನಡೆಸಲಾಗಿದ್ದು, ಜಿಲ್ಲಾ ಪಂಚಾಯಿತಿ ವತಿಯಿಂದ ಆರ್ಥಿಕ ಸಹಾಯವನ್ನು ನೀಡುವಂತೆ ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಗವೇನಹಳ್ಳಿ, ಹಾಸನ ತಾಲ್ಲೂಕು ಇವರು ಮನವಿಯನ್ನು ಸಲ್ಲಿಸಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಸರ್ಕಾರಿ ಪ್ರೌಢಶಾಲೆ, ಗವೇನಹಳ್ಳಿ, ಹಾಸನ ತಾಲ್ಲೂಕು, ಈ ಶಾಲೆಯ ವತಿಯಿಂದ ದಿನಾಂಕ: 28-08-2012ರಿಂದ 29-08-2012ರವರೆಗೆ ನಡೆದ ತಾಲ್ಲೂಕು ಮಟ್ಟದ ದಕ್ಷಿಣ ವಲಯ ಕ್ರೀಡಾಕೂಟಕ್ಕೆ ಜಿಲ್ಲಾ ಪಂಚಾಯಿತಿಯಿಂದ ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.<br>(ಕ್ರಮ: ಉಪ ಕಾರ್ಯದರ್ಶಿ (ಆಡಳಿತ), ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ) |
| 7 | ಅಂತರಾಷ್ಟ್ರೀಯ ಕ್ರೀಡೆಯಲ್ಲಿ ಭಾಗವಹಿಸಲು ಧನ ಸಹಾಯ ಕೋರಿ ಮನವಿ | ಟಿಪ್ಪಣಿ ಸಂಖ್ಯೆ: ಜಿಪಂಹಾ/ಅ(8) ವಂತಿಕೆ 73/2012-13 ದಿನಾಂಕ: 24-07-2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಶ್ರೀಮತಿ ಹೆಚ್.ಕೆ.ಪುಷ್ಪ ಬಿನ್ ದಿ: ರಾಧಾಕೃಷ್ಣಮೂರ್ತಿ ಇವರು ದಿನಾಂಕ: 02-11-2012ರಿಂದ 07-11-2012ರವರೆಗೆ ಚೀನಾ ದೇಶದ ತೈಪೆಯಲ್ಲಿ ನಡೆಯಲಿರುವ 17ನೇ ಏಷ್ಯನ್ ಮಾಸ್ಟರ್ ಅಥ್ಲೆಟಿಕ್ಸ್ ಸಂಸ್ಥೆಯಲ್ಲಿ ಭಾಗವಹಿಸಲು ಭಾರತ ತಂಡದಿಂದ ಆಯ್ಕೆಯಾಗಿದ್ದು, ಅಂತರಾಷ್ಟ್ರೀಯ ಕ್ರೀಡೆಯಲ್ಲಿ ಭಾಗವಹಿಸಲು ಜಿಲ್ಲಾ ಪಂಚಾಯಿತಿ ವತಿಯಿಂದ ಆರ್ಥಿಕ ಸಹಾಯವನ್ನು ನೀಡುವಂತೆ ಮನವಿ ಸಲ್ಲಿಸಿರುತ್ತಾರೆ. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಶ್ರೀಮತಿ ಹೆಚ್.ಕೆ.ಪುಷ್ಪ ಬಿನ್ ದಿ: ರಾಧಾಕೃಷ್ಣಮೂರ್ತಿ ಇವರು ದಿನಾಂಕ: 02-11-2012ರಿಂದ 07-11-2012ರವರೆಗೆ ಚೀನಾ ದೇಶದ ತೈಪೆಯಲ್ಲಿ ನಡೆಯಲಿರುವ 17ನೇ ಏಷ್ಯನ್ ಮಾಸ್ಟರ್ ಅಥ್ಲೆಟಿಕ್ಸ್ ಸಂಸ್ಥೆಯಲ್ಲಿ ಭಾಗವಹಿಸಲು ರೂ.5000/-(ರೂಪಾಯಿ ಐದು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.<br>(ಕ್ರಮ: ಉಪ ಕಾರ್ಯದರ್ಶಿ (ಆಡಳಿತ), ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ) |

-೯-

<table>
<tr>
<td>2</td>
<td>ಏಪ್ರಿಲ್ –2012ರ ಮಾಹೆಯಿಂದ ಆಗಸ್ಟ್ –2012ರ ಮಾಹೆಯವರೆಗಿನ ಮಾಸಿಕ ಲೆಕ್ಕಗಳನ್ನು ಹಣಕಾಸು, ಲೆಕ್ಕಪರಿಶೋಧನೆ ಹಾಗೂ ಯೋಜನಾ ಸ್ಥಾಯಿ ಸಮಿತಿಯ ಅನುಮೋದನೆಗೆ ಮಂಡಿಸುವ ಬಗ್ಗೆ.</td>
<td>ಟಿಪ್ಪಣಿ ಸಂಖ್ಯೆ: ಜಿಪಂಹಾ/ಆರ್ಥಿಕ/ಸಂಕಲನ/ಮಾಸಿಕಲೆಕ್ಕ/ 2012–2013 ದಿನಾಂಕ: 06–11–2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಮುಖ್ಯ ಲೆಕ್ಕಾಧಿಕಾರಿಯವರು ಏಪ್ರಿಲ್ –2012ರ ಮಾಹೆಯಿಂದ ಆಗಸ್ಟ್ 2012ರ ಮಾಹೆಯವರೆಗಿನ ಜಮಾ ಮತ್ತು ಖರ್ಚಿನ ತಃಖ್ತೆಗಳು, ಚಲನ್ ಮತ್ತು ಓಚರ್‌ಗಳು ಸ್ವೀಕೃತವಾಗಿರುತ್ತವೆ. ಖಜಾನೆಯಿಂದ ಸ್ವೀಕೃತವಾದ ಒಟ್ಟು ಜಮೆ ಮತ್ತು ಖರ್ಚಿನ ವಿವರಗಳನ್ನು ಪ್ರಧಾನ ಶೀರ್ಷಿಕೆವಾರು ಸಂಕಲನ ಗಣಕೀಕರಣದಲ್ಲಿ ತಯಾರಿಸಲಾಗಿದೆ. ಸದರಿ ಸಂಕಲನದ ತಃಖ್ತೆಯಲ್ಲಿ ವಿವರ, ರಾಜಸ್ವ ಜಮೆ ಮತ್ತು ಬಂಡವಾಳ ವೆಚ್ಚಗಳನ್ನು ಶೀರ್ಷಿಕೆಗಳವಾರು ಕ್ರೋಡೀಕರಿಸಲಾಗಿದ್ದು, ಸಭೆಯ ಅನುಮೋದನೆಗೆ ಮಂಡಿಸಿದರು.
<table>
<tr><th>ಮಾಹೆ</th><th>ಜಮೆ</th><th>ಖರ್ಚು</th></tr>
<tr><td>ಏಪ್ರಿಲ್–2012</td><td>370110863</td><td>64260757</td></tr>
<tr><td>ಮೇ–2012</td><td>77056326</td><td>108614579</td></tr>
<tr><td>ಜೂನ್–2012</td><td>128620343</td><td>132027298</td></tr>
<tr><td>ಜುಲೈ–2012</td><td>49294634</td><td>129004869</td></tr>
<tr><td>ಆಗಸ್ಟ್–2012</td><td>324407609</td><td>158841536</td></tr>
</table></td>
<td>ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಮುಖ್ಯ ಲೆಕ್ಕಾಧಿಕಾರಿಯವರು ಕೋರಿರುವಂತೆ ಏಪ್ರಿಲ್ –2012ರ ಮಾಹೆಯಿಂದ ಆಗಸ್ಟ್ –2012ರ ಮಾಹೆಯವರೆಗಿನ ಮಾಸಿಕ ಲೆಕ್ಕಗಳಿಗೆ ಅನುಮೋದನೆ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.
<table>
<tr><th>ಮಾಹೆ</th><th>ಜಮೆ</th><th>ಖರ್ಚು</th></tr>
<tr><td>ಏಪ್ರಿಲ್–2012</td><td>370110863</td><td>64260757</td></tr>
<tr><td>ಮೇ–2012</td><td>77056326</td><td>108614579</td></tr>
<tr><td>ಜೂನ್–2012</td><td>128620343</td><td>132027298</td></tr>
<tr><td>ಜುಲೈ–2012</td><td>49294634</td><td>129004869</td></tr>
<tr><td>ಆಗಸ್ಟ್–2012</td><td>324407609</td><td>158841536</td></tr>
</table>
(ಕ್ರಮ ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ)</td>
</tr>
<tr>
<td>3</td>
<td>2012–13ನೇ ಸಾಲಿನ ಆರ್ಥಿಕ ಇಲಾಖೆಯ ಹಾಗೂ ಇತರೆ ಕೇಂದ್ರ ಅನುದಾನ ಬಿಡುಗಡೆಯಾದ ಬಗ್ಗೆ.</td>
<td>ಟಿಪ್ಪಣಿ ಸಂಖ್ಯೆ: ಜಿಪಂಹಾ/ಆರ್ಥಿಕ/ಅಧೀ–1/4/ಹಕಾಸ್ಥಾ/ಟಿಪ್ಪಣಿ/2012–13 ದಿನಾಂಕ: 07–11–2012ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಜಿಲ್ಲಾ ಪಂಚಾಯಿತಿ ಹಾಸನಕ್ಕೆ ಆರ್ಥಿಕ ಇಲಾಖೆಯಿಂದ ಲಿಂಕ್ ಡಾಕ್ಯುಮೆಂಟ್ ಅನುದಾನ/ ಕೇಂದ್ರ ಪುರಸ್ಕೃತ ಅನುದಾನ ಬಿಡುಗಡೆಯಾಗಿದ್ದು, ಸಮಿತಿಯ ಅವಗಾಹನೆಗೆ ಮುಖ್ಯ ಲೆಕ್ಕಾಧಿಕಾರಿಯವರು ಮಂಡಿಸಿದರು.</td>
<td>ಜಿಲ್ಲಾ ಪಂಚಾಯಿತಿ ಹಾಸನಕ್ಕೆ ಆರ್ಥಿಕ ಇಲಾಖೆಯಿಂದ ಬಿಡುಗಡೆಯಾಗಿರುವ ಲಿಂಕ್ ಡಾಕ್ಯುಮೆಂಟ್ ಅನುದಾನ/ ಇಲಾಖೆ ಅನುದಾನ / ಕೇಂದ್ರ ಪುರಸ್ಕೃತ ಅನುದಾನವನ್ನು ಸಮಿತಿಯು ಪರಿಶೀಲಿಸಿ ವೆಚ್ಚ ಭರಿಸಲು ಅನುಮೋದನೆ ನೀಡಿತು.</td>
</tr>
<tr>
<td>4</td>
<td>2013–14ನೇ ಸಾಲಿನ ಜಿಲ್ಲಾ ಪಂಚಾಯಿತಿ ಮತ್ತು ಅಧೀನ ಇಲಾಖೆಗಳ ಅಪೆಂಡಿಕ್ಸ್ –ಬಿ ಯನ್ನು ಸರ್ಕಾರಕ್ಕೆ ಸಲ್ಲಿಸಲು ಅನುಮೋದನೆ ನೀಡುವ ಬಗ್ಗೆ.</td>
<td>ಮುಖ್ಯ ಲೆಕ್ಕಾಧಿಕಾರಿಯವರು 2013–14ನೇ ಸಾಲಿನ ಜಿಲ್ಲಾ ಪಂಚಾಯಿತಿ ಮತ್ತು ಅಧೀನ ಇಲಾಖೆಗಳ ಲೆಕ್ಕಶೀರ್ಷಿಕೆ/ ಉಪ ಶೀರ್ಷಿಕೆವಾರು ಹುದ್ದೆಗಳ ಸಂಖ್ಯೆ ಹಾಗೂ ಅಂದಾಜು ಆಯವ್ಯಯವನ್ನು ಸಿದ್ಧಪಡಿಸಿದ್ದು, ಸರ್ಕಾರದ ಅನುಮೋದನೆಗೆ ಕಳುಹಿಸಬೇಕಾಗಿದ್ದು, ಸಮಿತಿಯ ಅನುಮೋದನೆ ನೀಡಬೇಕೆಂದು ಕೋರಿದರು.</td>
<td>ಸಭೆಯಲ್ಲಿ ವಿಷಯದ ಬಗ್ಗೆ ಸಮಗ್ರವಾಗಿ ಪರಿಶೀಲಿಸಲಾಯಿತು.<br>ಮುಖ್ಯ ಲೆಕ್ಕಾಧಿಕಾರಿಯವರು ಕೋರಿರುವಂತೆ 2013–14ನೇ ಸಾಲಿನ ಜಿಲ್ಲಾ ಪಂಚಾಯಿತಿ ಮತ್ತು ಅಧೀನ ಇಲಾಖೆಗಳ ಅಪೆಂಡಿಕ್ಸ್–ಬಿ ಯನ್ನು ಸರ್ಕಾರದ ಅನುಮೋದನೆ ಕಳುಹಿಸಲು ಸಭೆಯಲ್ಲಿ ಸವಾನುಮತದಿಂದ ಅನುಮೋದನೆ ನೀಡಲಾಯಿತು.<br>(ಕ್ರಮ ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ)</td>
</tr>
</table>

ಮಾನ್ಯ ಅಧ್ಯಕ್ಷರು ಮಾತನಾಡಿ ಹಿರೀಸಾವೆ ಗ್ರಾಮದಲ್ಲಿ ಪಶುಚಿಕಿತ್ಸಾಲಯದ ಕಟ್ಟಡ ತುಂಬಾ ಹಳೆಯದಾಗಿದ್ದು, ಶಿಥಿಲಾವಸ್ಥೆಯಲ್ಲಿರುತ್ತದೆ. ಆದ್ದರಿಂದ, ಹೊಸ ಕಟ್ಟಡ ಮಂಜೂರು ಮಾಡಬೇಕೆಂದು ತಿಳಿಸಿದರು.

ಉಪ ನಿರ್ದೇಶಕರು ಉತ್ತರಿಸುತ್ತಾ, ಹೊಸ ಕಟ್ಟಡ ಮಂಜೂರಾತಿಗಾಗಿ ನಬಾರ್ಡಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದು ವಿವರ ನೀಡಿದರು.

**ಮೀನುಗಾರಿಕೆ ಇಲಾಖೆ:**

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್‌ರವರು ಮಾತನಾಡುತ್ತಾ, ಮೀನುಗಾರಿಕೆ ಇಲಾಖೆಯ ವತಿಯಿಂದ ರೈತರಿಗೆ ಒಳ್ಳೆಯ ಜಾತಿಯ ಮೀನುಗಳನ್ನು ಸಾಕಲು ಮೀನುಮರಿಗಳನ್ನು ವಿತರಿಸಬೇಕೆಂದು ಕೋರಿದರು.

ಮುಖ್ಯ ಲೆಕ್ಕಾಧಿಕಾರಿಗಳು ಮಾತನಾಡುತ್ತಾ, ಇಲಾಖೆಯ ವ್ಯಾಪ್ತಿಯಲ್ಲಿ ಎಷ್ಟು ಕೆರೆಗಳಿವೆ, ಎಷ್ಟು ಕೆರೆಗಳಲ್ಲಿ ಮೀನುಮರಿಗಳನ್ನು ಬಿಟ್ಟು ಸಾಕಲಾಗುತ್ತಿದೆ ಎಂಬ ಬಗ್ಗೆ ವಿವರವಾದ ಮಾಹಿತಿಯನ್ನು ಸಭೆಗೆ ನೀಡಲು ಸೂಚಿಸಿದರು.

**ಅರಣ್ಯ ಇಲಾಖೆ:**

ಉಪ ಅರಣ್ಯ ಸಂರಕ್ಷಣಾಧಿಕಾರಿಯವರು ಮಾತನಾಡುತ್ತಾ, ವಿಶೇಷ ಅಭಿವೃದ್ಧಿ ಯೋಜನೆಯಡಿ ರೂ.40.00ಲಕ್ಷಗಳು ಮತ್ತು ಕಟ್ಟಡ ಕಾಮಗಾರಿಗಳಿಗೆ ರೂ.10.00ಲಕ್ಷಗಳ ಅನುದಾನ ನಿಗದಿಯಾಗಿದ್ದು, ವಿಶೇಷ ಅಭಿವೃದ್ಧಿ ಯೋಜನೆಯಡಿ ರೂ.23.9ಲಕ್ಷಗಳು ಬಿಡುಗಡೆಯಾಗಿದ್ದು, ಪ್ರತಿ ತಾಲ್ಲೂಕಿನಲ್ಲಿ 2 ನರ್ಸರಿಗಳನ್ನು ಮಾಡಲಾಗಿದ್ದು, ನೆಡುತೋಪುಗಳನ್ನು ಮತ್ತು ರೈತರ ಜಮೀನಿನಲ್ಲಿ ಸಸಿಗಳನ್ನು ನೆಡಲಾಗಿದೆ ಎಂದು ವಿವರ ನೀಡಿದರು.

ಮುಖ್ಯ ಯೋಜನಾಧಿಕಾರಿಯವರು ಮಾತನಾಡುತ್ತಾ, ಕಟ್ಟಡಗಳಿಗೆ ಸಂಬಂಧಿಸಿದಂತೆ, ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ನೀಡಿರುವುದಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ತಿಳಿಸಿದರು.

**ಸಹಕಾರ ಇಲಾಖೆ:**

ಉಪ ನಿಬಂಧಕರು, ಸಹಕಾರ ಇಲಾಖೆರವರು 2012–13ನೇ ಸಾಲಿಗೆ ಇಲಾಖೆಯ ವಿವಿಧ ಯೋಜನೆಗಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ವಿವರಗಳನ್ನು ಯಾವ ಯಾವ ಸೌಲಭ್ಯವನ್ನು ಒದಗಿಸಲಾಗುವುದು ಎಂಬ ಬಗ್ಗೆ ವಿವರಗಳನ್ನು ಸಭೆಯ ಗಮನಕ್ಕೆ ತಂದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಸಂಘ ಸಂಸ್ಥೆಗಳಿಗೆ ಸಹಾಯಧನ ನೀಡಲಾಗುವುದು ಎಂಬ ಬಗ್ಗೆ ಮಾನ್ಯ ಅಧ್ಯಕ್ಷರು ಮತ್ತು ಮಾನ್ಯ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಅಧ್ಯಕ್ಷರ ಗಮನಕ್ಕೆ ತಂದು ನಂತರ ಸಹಾಯಧನ ನೀಡಲು ಕ್ರಮ ವಹಿಸಬೇಕೆಂದು ತಿಳಿಸಿದರು.

**ಸಮಾಜ ಕಲ್ಯಾಣ ಇಲಾಖೆ:**

ಸಮಾಜ ಕಲ್ಯಾಣಾಧಿಕಾರಿಯವರು ಮಾತನಾಡುತ್ತಾ, ವಿದ್ಯಾರ್ಥಿನಿಲಯಗಳಲ್ಲಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ವಿದ್ಯಾರ್ಥಿವೇತನವನ್ನು ನೀಡಲಾಗುತ್ತಿತ್ತು. ಅದೇ ರೀತಿಯಲ್ಲಿ ಪ್ರಸಕ್ತ ಸಾಲಿನಿಂದ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೂ ಆನ್ ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡಿ ವಿದ್ಯಾರ್ಥಿವೇತನವನ್ನು ನೀಡಲಾಗುತ್ತಿದೆ ಎಂದು ಸಭೆಯ ಗಮನಕ್ಕೆ ತಂದರು.

ಉಪ ನಿರ್ದೇಶಕರು ಉತ್ತರಿಸುತ್ತಾ, ಭಾಗ್ಯಲಕ್ಷ್ಮಿ ಬಾಂಡ್ ವಿತರಿಸಲು ಹಣವನ್ನು ಪಡೆಯುತ್ತಿರುವ ಬಗ್ಗೆ ನನ್ನ ಗಮನಕ್ಕೆ ಬಂದಿರುವುದಿಲ್ಲ. ಒಂದು ವೇಳೆ ಹಾಗೇನಾದರೂ ಪಡೆಯುತ್ತಿದ್ದು, ಇಂತಹವರೇ ಎಂದು ಹೇಳಿದಲ್ಲಿ ಅವರ ಮೇಲೆ ನಿರ್ದಾಕ್ಷಿಣ್ಯವಾಗಿ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

**ಕೃಷಿ ಇಲಾಖೆ:**

ಜಂಟಿ ಕೃಷಿ ನಿರ್ದೇಶಕರು ಮಾತನಾಡಿ ಇಲಾಖೆಯ ಕಾರ್ಯಕ್ರಮಗಳಲ್ಲಿ ಇಲ್ಲಿಯವರೆಗೆ ಜಿಲ್ಲಾ ಪಂಚಾಯಿತಿ ಯೋಜನಾ ಕಾರ್ಯಕ್ರಮದಲ್ಲಿ ಬಿಡುಗಡೆಯಾದ ಅನುದಾನದಲ್ಲಿ ಶೇ.72ರಷ್ಟು ಪ್ರಗತಿಯನ್ನು ಸಾಧಿಸಲಾಗಿದೆ ಎಂದು ವಿವರ ನೀಡಿದರು. ಕಟ್ಟಡ ಕಾಮಗಾರಿಗಳ ಕೆಲಸ ಪ್ರಾರಂಭವಾಗಿದೆ ಎಂದು ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್‌ರವರು ಮಾತನಾಡುತ್ತಾ, ಸಣ್ಣ ಮತ್ತು ಅತಿಸಣ್ಣ ರೈತರಿಗೆ ಸರ್ಕಾರದ ವತಿಯಿಂದ ರೂ.1000.00ಗಳನ್ನು ನೀಡಲು ಅನುದಾನ ಬಿಡುಗಡೆಯಾಗಿದ್ದು, ಈ ಬಗ್ಗೆ ಏನು ಕ್ರಮ ವಹಿಸಲಾಗಿದೆ ಎಂಬ ಕುರಿತು ಮಾಹಿತಿಯನ್ನು ನೀಡುವಂತೆ ಕೋರಿದರು.

ಜಂಟಿ ನಿರ್ದೇಶಕರು ಮಾತನಾಡುತ್ತಾ, ಸರ್ಕಾರದಿಂದ ಈ ಯೋಜನೆಗೆ ಜಿಲ್ಲೆಗೆ ಸುಮಾರು ರೂ.18.00ಕೋಟಿಗಳ ಅನುದಾನ ಬಿಡುಗಡೆಯಾಗಿದ್ದು, ಮುಂದಿನ ವಾರದಲ್ಲಿ ರೈತರ ಬ್ಯಾಂಕ್ ಖಾತೆಗೆ ಹಣವನ್ನು ಜಮಾ ಮಾಡಲು ಕ್ರಮ ವಹಿಸುವುದಾಗಿ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಲಕ್ಷ್ಮಣ್‌ರವರು ಮಾತನಾಡುತ್ತಾ, ರಿಯಾಯಿತಿ ದರದಲ್ಲಿ ಸಿಗುವ ಯಂತ್ರೋಪಕರಣಗಳಿಗೆ ಹೆಚ್ಚಿನ ಬೇಡಿಕೆಯಿದ್ದು, ರೈತರಿಗೆ ಯಂತ್ರೋಪಕರಣಗಳನ್ನು ವಿತರಿಸಲು ಕ್ರಮ ವಹಿಸಬೇಕೆಂದು ಕೋರಿದರು.

ಜಂಟಿ ನಿರ್ದೇಶಕರು ಉತ್ತರಿಸುತ್ತಾ, ರಾಜ್ಯ ವಲಯದಲ್ಲಿ ವಿಶೇಷ ಘಟಕ ಯೋಜನೆಯಲ್ಲಿ ವಿತರಿಸುವ ಯಂತ್ರೋಪಕರಣಗಳಿಗೆ ಅನುದಾನ ಲಭ್ಯವಿದ್ದು, ಶೇ.90ರಷ್ಟು ಪ್ರಗತಿಯಾಗಿರುತ್ತದೆ. ಆದರೆ, ಸಾಮಾನ್ಯ ವರ್ಗಕ್ಕೆ ರಾಜ್ಯವಲಯದಲ್ಲಿ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲವೆಂದು ವಿವರ ನೀಡಿದರು.

**ತೋಟಗಾರಿಕೆ ಇಲಾಖೆ:** ಉಪ ನಿರ್ದೇಶಕರು ಇಲಾಖಾ ಕಾರ್ಯಕ್ರಮಗಳ ಪ್ರಗತಿಯ ಬಗ್ಗೆ ಸಭೆಯ ಗಮನಕ್ಕೆ ತಂದರು.

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್‌ರವರು ಮಾತನಾಡಿ ತೋಟಗಾರಿಕೆ ಇಲಾಖೆಯ ಕಾರ್ಯಕ್ರಮಗಳು ಸಮರ್ಪಕವಾಗಿ ಅನುಷ್ಠಾನವಾಗುತ್ತಿಲ್ಲವೆಂದು ತಿಳಿಸುತ್ತಾ, ಯಾವ ಯಾವ ಬೆಳೆಗಳಿಗೆ ಸಹಾಯಧನವನ್ನು ನೀಡಲಾಗುತ್ತಿದೆ ಎಂಬ ಬಗ್ಗೆ ವಿವರ ನೀಡಬೇಕೆಂದು ತಿಳಿಸಿದರು.

ಉಪ ನಿರ್ದೇಶಕರು ಉತ್ತರಿಸುತ್ತಾ, ತೋಟಗಾರಿಕೆ ಇಲಾಖೆಯ ವಿವಿಧ ಯೋಜನೆಗಳಿಗೆ ರೂ.458.00ಕೋಟಿಗಳ ಅನುದಾನ ಲಭ್ಯವಿದ್ದು, ಜಿಲ್ಲೆಯಲ್ಲಿ ಮಾವು, ಸಪೋಟ, ಮತ್ತು ತರಕಾರಿ ಬೆಳೆಗಳಿಗೆ ಸಹಾಯಧನವನ್ನು ರಾಷ್ಟ್ರೀಯ ತೋಟಗಾರಿಕಾ ಮಿಷನ್ ಅಡಿಯಲ್ಲಿ ನೀಡಲಾಗುತ್ತಿದೆ ಎಂದು ಸಭೆಗೆ ವಿವರ ನೀಡಿದರು.

**ಪಶುಪಾಲನಾ ಇಲಾಖೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡಿ ಪಶುಪಾಲನಾ ಇಲಾಖೆಯಡಿ ಅಪೂರ್ಣಗೊಂಡ ಕಟ್ಟಡ ಕಾಮಗಾರಿಗಳಿಗೆ ಅನುಮೋದನೆಯನ್ನು ನೀಡಿ ಅನುದಾನವನ್ನೂ ಸಹ ಬಿಡುಗಡೆ ಮಾಡಲಾಗಿದೆ. ಆದ್ದರಿಂದ, ಕಾಮಗಾರಿಗಳನ್ನು ಪೂರ್ಣಗೊಳಿಸಿ ಇಲಾಖೆಯ ವಶಕ್ಕೆ ಪಡೆಯುವ ಬಗ್ಗೆ ಕ್ರಮ ವಹಿಸಬೇಕೆಂದು ಉಪ ನಿರ್ದೇಶಕರು, ಪಶುಪಾಲನಾ ಇಲಾಖೆರವರಿಗೆ ತಿಳಿಸಿದರು.

**ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ:**

ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಮಾತನಾಡಿ ಆಲೂರು ಮತ್ತು ಸಕಲೇಶಪುರ ತಾಲ್ಲೂಕುಗಳಲ್ಲಿ ಆನೆ ಹಾವಳಿ ಸಮಸ್ಯೆಯಿರುವುದರಿಂದ, ವಿದ್ಯಾರ್ಥಿಗಳಿಗೆ ಬಹಳ ತೊಂದರೆಯಾಗಿರುತ್ತದೆ. ಆದ್ದರಿಂದ, ಸದರಿ ತಾಲ್ಲೂಕಿನ ಮಕ್ಕಳಿಗೆ ಮೊದಲ ಆದ್ಯತೆ ಮೇಲೆ ವಿದ್ಯಾರ್ಥಿನಿಲಯದ ಸೌಲಭ್ಯವನ್ನು ನೀಡಬೇಕೆಂದು ಕೋರಿದರು.

ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆರವರು ಮಾತನಾಡಿ ವಿದ್ಯಾರ್ಥಿನಿಲಯಗಳಲ್ಲಿ ಸಂಖ್ಯಾಬಲ ಹೆಚ್ಚಳದ ಪ್ರಸ್ತಾವನೆಗೆ ಅನುಮೋದನೆ ಸಿಕ್ಕಿದ್ದು, ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯದಲ್ಲಿ ಅವಕಾಶ ಮಾಡಿಕೊಡಲಾಗುವುದು. ಆದರೆ, ಈಗ ಸರ್ಕಾರದಿಂದ ಬಯೋಮೆಟ್ರಿಕ್ ವ್ಯವಸ್ಥೆ ಅಳವಡಿಸಿದ್ದು, ಅನಧಿಕೃತವಾಗಿ ವಿದ್ಯಾರ್ಥಿಗಳನ್ನು ಸೇರಿಸಲು ತೊಂದರೆಯಾಗಿರುವುದಾಗಿ ಸಭೆಯ ಗಮನಕ್ಕೆ ತಂದರು.

ಮಾನ್ಯ ಅಧ್ಯಕ್ಷರು ಮಾತನಾಡಿ ಮೊಸಳೆಹೊಸಹಳ್ಳಿ ವಿದ್ಯಾರ್ಥಿನಿಲಯಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ನಿಲಯ ಮೇಲ್ವಿಚಾರಕರು ನಿಲಯದಲ್ಲಿ ಹಾಜರಿರಲಿಲ್ಲ ಹಾಗೂ ನಿಲಯದಲ್ಲಿ ಶುಚಿತ್ವ ಇರಲಿಲ್ಲ. ಈ ಬಗ್ಗೆ ಗಮನಹರಿಸಿ ಅಗತ್ಯ ಕ್ರಮ ವಹಿಸುವಂತೆ ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಇಲಾಖೆರವರಿಗೆ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಮಾತನಾಡುತ್ತಾ, ರಾಯರಕೊಪ್ಪಲು ಗ್ರಾಮದಲ್ಲಿರುವ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯದ ಕಟ್ಟಡ ಖಾಲಿಯಿದ್ದು, ಅದನ್ನು ಸರ್ಕಾರಿ ಶಾಲೆಯ ಮಕ್ಕಳಿಗೆ ತರಗತಿಯನ್ನು ನಡೆಸಲು ಉಪಯೋಗ ಮಾಡಿಕೊಳ್ಳಲು ಅನುಮತಿಯನ್ನು ನೀಡಬೇಕೆಂದು ಕೋರಿರು.

ಅದರಂತೆ ರಾಯರಕೊಪ್ಪಲು ಗ್ರಾಮದಲ್ಲಿರುವ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯದ ಕಟ್ಟಡವನ್ನು ಸರ್ಕಾರಿ ಶಾಲೆಯ ಮಕ್ಕಳಿಗೆ ತರಗತಿಯನ್ನು ನಡೆಸಲು ತಾತ್ಕಾಲಿಕವಾಗಿ ಉಪಯೋಗ ಮಾಡಿಕೊಳ್ಳಲು ಅನುಮತಿಯನ್ನು ನೀಡಲು ಸಭೆಯಲ್ಲಿ ತೀರ್ಮಾನಿಸಲಾಯಿತು.

**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ:**

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್‌ರವರು ಮಾತನಾಡಿ ಚನ್ನರಾಯಪಟ್ಟಣ ತಾಲ್ಲೂಕು ಹೊಸೂರು, ಹೊಂಬಾಳೆ ಗ್ರಾಮಗಳಲ್ಲಿ ಅಂಗನವಾಡಿ ಕೇಂದ್ರಗಳು ಪ್ರಾರಂಭವಾಗಿರುವುದಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು ಮತ್ತು ಇಟ್ಟಿಗೆ ಕಾರ್ಖಾನೆಗಳಲ್ಲಿ ದುಡಿಯುವ ಮಹಿಳೆಯರಿಗೆ ಮತ್ತು ಮಕ್ಕಳಿಗೆ ಪೌಷ್ಠಿಕ ಆಹಾರವನ್ನು ವಿತರಿಸಲು ಕ್ರಮ ವಹಿಸಬೇಕೆಂದು ಕೋರಿದರು.

ಉಪ ನಿರ್ದೇಶಕರು, ಮಾತನಾಡುತ್ತಾ, ಕೇಂದ್ರಸರ್ಕಾರಕ್ಕೆ 250 ಹೊಸ ಅಂಗನವಾಡಿ ಕೇಂದ್ರಗಳನ್ನು ಮಂಜೂರು ಮಾಡಲಾಗಿದ್ದು, ಇನ್ನು 2–3ತಿಂಗಳಲ್ಲಿ ಮಂಜೂರಾಗುವ ಸಾಧ್ಯತೆಯಿರುತ್ತದೆ ಎಂದು ವಿವರ ನೀಡಿದರು ಮತ್ತು ಇಲಾಖೆಯ ವತಿಯಿಂದ ಮಕ್ಕಳಿಗೆ, ಗರ್ಭಿಣಿಯರಿಗೆ ಪೌಷ್ಠಿಕ ಆಹಾರವನ್ನು ವಿತರಿಸಲು ಕ್ರಮ ವಹಿಸಲಾಗುತ್ತಿದೆ ಎಂದು ತಿಳಿಸಿದರು.

ಮಾನ್ಯ ಅಧ್ಯಕ್ಷರು ಮಾತನಾಡಿ ಕೆಲವು ಕಡೆ ಭಾಗ್ಯಲಕ್ಷ್ಮಿ ಬಾಂಡ್ ವಿತರಿಸಲು ಫಲಾನುಭವಿಗಳಿಂದ ರೂ.500.00ಗಳನ್ನು ವಸೂಲು ಮಾಡುತ್ತಿರುವುದು ಕಂಡುಬಂದಿರುತ್ತದೆ. ಆದ್ದರಿಂದ, ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಬೇಕೆಂದು ತಿಳಿಸಿದರು.

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ:**

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಮಾತನಾಡಿ ಪ್ರಸಕ್ತ ಸಾಲಿಗೆ ಕಟ್ಟಡಗಳ ದುರಸ್ಥಿಗೆ ನಿಗದಿಪಡಿಸಿರುವ ಅನುದಾನವನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ಬಿಡುಗಡೆ ಮಾಡಿದ್ದು, ಕಾಮಗಾರಿಗಳನ್ನು ಅನುಷ್ಟಾನ ಮಾಡಬೇಕಾಗಿರುತ್ತದೆ ಎಂದು ವಿವರ ನೀಡಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ವೈದ್ಯರ ನೇಮಕಾತಿ ಕುರಿತಂತೆ ಮಾಹಿತಿಯನ್ನು ನೀಡುವಂತೆ ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಮಾತನಾಡಿ ಜಿಲ್ಲೆಯಲ್ಲಿ ವೈದ್ಯರ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಆದರೆ, ಗ್ರಾಮೀಣ ಪ್ರದೇಶಗಳಲ್ಲಿ ವಸತಿ ಸೌಲಭ್ಯದ ಕೊರತೆಯಿರುವುದರಿಂದ, ಅಲ್ಲಿ ಕೆಲಸ ನಿರ್ವಹಿಸಲು ಯಾರೂ ಮುಂದೆ ಬರುತ್ತಿಲ್ಲವೆಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಲಕ್ಷ್ಮಣರವರು ಮಾತನಾಡುತ್ತಾ, ವೈದ್ಯರ ಬದಲಿಗೆ 108 ಆಂಬುಲೆನ್ಸ್ ವ್ಯವಸ್ಥೆಯನ್ನು ಇನ್ನೂ ಉತ್ತಮಗೊಳಿಸುವುದು ಸೂಕ್ತವಾಗಿರುತ್ತದೆ. ವೈದ್ಯರುಗಳಿಗೆ ಸಂಬಳ ಸಾರಿಗೆ ವ್ಯವಸ್ಥೆಯನ್ನು ಹೆಚ್ಚು ಮಾಡಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್‌ರವರು ಮಾತನಾಡುತ್ತಾ, ಮಟ್ಟನವಿಲೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ರೋಗಿಗಳಿಗೆ ಸಮರ್ಪಕವಾಗಿ ಸೇವೆ ಸಿಗುತ್ತಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಮಾತನಾಡಿ ಮಟ್ಟನವಿಲೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಆಪರೇಷನ್ ಥಿಯೇಟರ್ ಮಂಜೂರಾಗಿಲ್ಲವೆಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಮಾತನಾಡುತ್ತಾ, ಆಲೂರು ತಾಲ್ಲೂಕು ರಾಯರಕೊಪ್ಪಲು ಗ್ರಾಮದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡವು ಬಹಳ ಹಳೆಯದಾಗಿದ್ದು, ಉಪಯೋಗಕ್ಕೆ ಬಾರದಾಗಿದೆ. ಆದ್ದರಿಂದ, ಹೊಸ ಕಟ್ಟಡವನ್ನು ಮಂಜೂರು ಮಾಡುವಂತೆ ಕೋರಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಮಾತನಾಡಿ ಆಲೂರು ತಾಲ್ಲೂಕು ರಾಯರಕೊಪ್ಪಲು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಹೊಸ ಕಟ್ಟಡಕ್ಕೆ ಪ್ರಸ್ತಾವನೆಯನ್ನು ಈಗಾಗಲೇ ಸರ್ಕಾರಕ್ಕೆ ಸಲ್ಲಿಸಿರುವುದಾಗಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ಮಾತನಾಡಿ ಚನ್ನರಾಯಪಟ್ಟಣ ತಾಲ್ಲೂಕು ದಿಡಗ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡವನ್ನು ಇಲಾಖೆಯ ವಶಕ್ಕೆ ನೀಡಿರುವುದಿಲ್ಲ. ಈ ಬಗ್ಗೆ ಸೂಕ್ತ ಕ್ರಮ ವಹಿಸಬೇಕೆಂದು ತಿಳಿಸಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರೊಂದಿಗೆ ಸ್ಥಳ ಪರಿಶೀಲನೆ ನಡೆಸಿ ಕಟ್ಟಡವನ್ನು ಇಲಾಖೆಯ ವಶಕ್ಕೆ ಪಡೆಯುವ ಬಗ್ಗೆ ಕ್ರಮ ವಹಿಸುವುದಾಗಿ ತಿಳಿಸಿದರು.

ಸಾರ್ವಜನಿಕ ಶಿಕ್ಷಣ ಇಲಾಖೆ ರವರು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರೊಂದಿಗೆ ಚರ್ಚೆ ನಡೆಸಿ ನಂತರ ಕಾಮಗಾರಿಗಳ ಪಟ್ಟಿಯನ್ನು ಸಿದ್ಧಪಡಿಸಲು ಕ್ರಮ ವಹಿಸುವಂತೆ ತಿಳಿಸಿದರು.

ಎಸ್.ಡಿ.ಎಂ.ಸಿ ಮೂಲಕ ಶಾಲೆಗಳಿಗೆ ಪಂಚಸೌಲಭ್ಯವನ್ನು ಒದಗಿಸಲಾಗುತ್ತಿದ್ದು, ಈ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತರಬೇಕೆಂದು ನಿರ್ದೇಶನ ನೀಡುವಂತೆ ಜಿಲ್ಲಾ ಉಪಯೋಜನಾ ಸಮನ್ವಯಾಧಿಕಾರಿ, ಸರ್ವ ಶಿಕ್ಷಣ ಅಭಿಯಾನರವರಿಗೆ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಮಾತನಾಡುತ್ತಾ, ಆಲೂರು ತಾಲ್ಲೂಕು ಕಲ್ಲಾರೆ ಗ್ರಾಮದಲ್ಲಿ ಪ್ರೌಢಶಾಲೆ ಕಟ್ಟಡ ನಿರ್ಮಾಣದ ಸ್ಥಳದಲ್ಲಿಯೇ ಹೈಪವರ್ ಟೆನ್ಷನ್ ವೈರ್ ಹಾದುಹೋಗಿದ್ದು, ಅದನ್ನು ಸ್ಥಳಾಂತರ ಮಾಡಲು ಕೆ.ಇ.ಬಿ ರೂ.1.60ಲಕ್ಷಗಳ ಠೇವಣಿಯನ್ನು ಕಟ್ಟಬೇಕೆಂದು ಚೆಸ್ಕಾಂ ಅಧಿಕಾರಿಗಳು ತಿಳಿಸಿರುತ್ತಾರೆ ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಲಕ್ಷ್ಮಣ್‌ರವರು ಮಾತನಾಡುತ್ತಾ, ಸರ್ಕಾರಿ ಶಾಲೆ, ಆಸ್ಪತ್ರೆ ಮುಂತಾದವುಗಳ ಮೇಲೆ ಹಾದುಹೋಗುವ ವೈರನ್ನು ಸ್ಥಳಾಂತರ ಮಾಡಲು ಅವಕಾಶವಿದ್ದು, ಈ ಬಗ್ಗೆ ಶಾಸಕರೊಂದಿಗೆ ಚರ್ಚಿಸಿ ಕ್ರಮ ವಹಿಸಬಹುದಾಗಿದೆ ಎಂದು ಅಧಿಕಾರಿಗಳಿಗೆ ತಿಳಿಸಿದರು.

<u>**ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ:**</u>

ಸಹಾಯಕ ನಿರ್ದೇಶಕರು ಮಾತನಾಡುತ್ತಾ, ಇಲಾಖೆಯ ವಿವಿಧ ಯೋಜನೆಗಳಿಗೆ ಬಿಡುಗಡೆಯಾಗಿರುವ ಅನುದಾನದ ಕುರಿತು ವಿವರಗಳನ್ನು ಸಭೆಯ ಗಮನಕ್ಕೆ ತಂದರು ಇಲ್ಲಿಯವರೆಗೆ ಜಿಲ್ಲಾ ಪಂಚಾಯತ್ ಯೋಜನಾ ಕಾರ್ಯಕ್ರಮದಲ್ಲಿ 3 ಕಂತಿನ ಅನುದಾನ ಬಿಡುಗಡೆಯಾಗಿದೆ ಎಂದು ಸಭೆಗೆ ವಿವರ ನೀಡಿದರು.

2012–13ನೇ ಸಾಲಿನಲ್ಲಿ ಪೈಕಾ ಯೋಜನೆಯಡಿಯಲ್ಲಿ ಶಾಲಾ ಮೈದಾನಗಳ ಅಭಿವೃದ್ಧಿಗೆ ರೂ.26.00ಲಕ್ಷಗಳು ಲಭ್ಯವಿದೆ. ಆದರೆ, ಹಿಂದಿನ ಸಾಲಿನಲ್ಲಿ ಕರ್ನಾಟಕ ಮೂಲ ಸೌಕರ್ಯಗಳ ಇಲಾಖೆಯವರಿಗೆ ಅನುದಾನ ನೀಡಲಾಗಿತ್ತು. ಕಾಮಗಾರಿಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡಿರುವುದಿಲ್ಲ. ಆದ್ದರಿಂದ, ಪ್ರಸಕ್ತ ಸಾಲಿನಲ್ಲಿ ಶಾಲಾ ಮೈದಾನಗಳ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಸಂಬಂಧಪಟ್ಟ ಕ್ಷೇತ್ರದ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತಂದು ಅನುಷ್ಠಾನಗೊಳಿಸಲು ಕ್ರಮ ವಹಿಸಲು ಸಂಬಂಧಪಟ್ಟ ಏಜನ್ಸಿಯವರಿಗೆ ನಿರ್ದೇಶನ ನೀಡುವಂತೆ ಕೋರಿದರು.

<u>**ವಯಸ್ಕರ ಶಿಕ್ಷಣ ಇಲಾಖೆ:**</u>

ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಯವರು ಮಾತನಾಡುತ್ತಾ, ಡಾ: ನಂಜುಂಡಪ್ಪ ವರದಿಯನ್ವಯ 5 ತಾಲ್ಲೂಕುಗಳಲ್ಲಿನ ನವಸಾಕ್ಷರರಿಗೆ ವೃತ್ತಿ ಕೌಶಲ್ಯ ತರಬೇತಿ ಯಲ್ಲಿ ಡ್ರೆಸ್ ಮೇಕಿಂಗ್ ತರಬೇತಿಯನ್ನು ನೀಡಲಾಗುತ್ತಿದ್ದು, ಗ್ರಾಮಗಳನ್ನು ಆಯ್ಕೆ ಮಾಡಲಾಗಿದ್ದು, ತರಬೇತಿಯನ್ನು ಡಿಸೆಂಬರ್ ಮಾಹೆಯಲ್ಲಿ ಪ್ರಾರಂಭಿಸಲಾಗುವುದು ಎಂದು ವಿವರ ನೀಡಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ತರಬೇತಿ ಕಾರ್ಯಕ್ರಮವನ್ನು ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತಂದು ಅನುಷ್ಠಾನ ಮಾಡಬೇಕೆಂದು ತಿಳಿಸಿದರು.

ದಿನಾಂಕ: 22-11-2012ರಂದು ಬೆಳಿಗ್ಗೆ 11-30ಗಂಟೆಗೆ ಹೇಮಾವತಿ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳು

ಅಧ್ಯಕ್ಷತೆ: ಶ್ರೀಮತಿ ಡಿ.ಜಿ.ಅಂಬಿಕಾ ರಾಮಣ್ಣ

ಅಧ್ಯಕ್ಷರು

ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ

ಹಾಜರಿ: 06

ಗೈರು ಹಾಜರಿ: 00

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | ಮುಖ್ಯ ಲೆಕ್ಕಾಧಿಕಾರಿಯವರು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರು, ಸದಸ್ಯರು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡಬೇಕೆಂದು ಮಾನ್ಯ ಅಧ್ಯಕ್ಷರನ್ನು ಕೋರಿದರು. | | |
| 1 | 2012-13ನೇ ಸಾಲಿನಲ್ಲಿ ಏಪ್ರಿಲ್ 2012ರಿಂದ ಅಕ್ಟೋಬರ್ 2012ರವರೆಗೆ ಸರ್ಕಾರದಿಂದ ಬಿಡುಗಡೆ ಯಾಗಿರುವ ಅನುದಾನದ ವೆಚ್ಚಗಳ ಕುರಿತು ಇಲಾಖಾ ವಾರು ಪರಿಶೀಲನೆ ಬಗ್ಗೆ. | ಮುಖ್ಯ ಲೆಕ್ಕಾಧಿಕಾರಿಯವರು ಮಾತನಾಡುತ್ತಾ, 2012-13ನೇ ಸಾಲಿನಲ್ಲಿ ಲಿಂಕ್ ಡಾಕ್ಯುಮೆಂಟಿನಲ್ಲಿ ಯೋಜನಾ ಲೆಕ್ಕಶೀರ್ಷಿಕೆಯಡಿ ನಿಗದಿಪಡಿಸಿರುವ ರೂ.7705.11ಲಕ್ಷಗಳಲ್ಲಿ ಇಲ್ಲಿಯವರೆಗೆ ಸರ್ಕಾರದಿಂದ ರೂ.5481.23ಲಕ್ಷಗಳು ಬಿಡುಗಡೆಯಾಗಿದ್ದು, ಜಿಲ್ಲಾ ಪಂಚಾಯಿತಿ ವಿವಿಧ ಅನುಷ್ಠಾನಾಧಿಕಾರಿಗಳಿಗೆ ಇಲ್ಲಿಯವರೆಗೆ ರೂ.5359.82ಲಕ್ಷಗಳನ್ನು ಬಿಡುಗಡೆ ಮಾಡಿರುವುದಾಗಿ ಸಭೆಯ ಗಮನಕ್ಕೆ ತಂದರು.<br>**<u>ಶಿಕ್ಷಣ ಇಲಾಖೆ:</u>**<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಆರ್.ಐ.ಡಿ.ಎಫ್-13ರಲ್ಲಿ ಶಾಲಾ ಕಟ್ಟಡಗಳ ನಿರ್ಮಾಣಕ್ಕೆ ಹಾಸನ ವಿಭಾಗಕ್ಕೆ ಆಲೂರು, ಸಕಲೇಶಪುರ ಮತ್ತು ಹಾಸನ ತಾಲ್ಲೂಕುಗಳಿಗೆ ಸಂಬಂಧಿಸಿದಂತೆ, ರೂ.114.00ಲಕ್ಷಗಳು ಬಿಡುಗಡೆಯಾಗಿದ್ದು, ಅನುದಾನ ವ್ಯಪಗತವಾಗದಂತೆ ವಿನಿಯೋಗಿಸಲು ಕ್ರಮ ವಹಿಸುವಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಇವರಿಗೆ ತಿಳಿಸಿದರು ಹಾಗೂ ಆರ್.ಐ.ಡಿ.ಎಫ್ ಅಡಿಯಲ್ಲಿ ಪ್ರತಿ ಕಾಮಗಾರಿಗೆ ರೂ.20.00ಲಕ್ಷಗಳನ್ನು ನಿಗದಿಪಡಿಸಿದ್ದು, ಕಾಮಗಾರಿಯನ್ನು ಪೂರ್ಣಗೊಳಿಸಲು ಅಗತ್ಯ ಕ್ರಮ ವಹಿಸುವಂತೆ ತಿಳಿಸಿದರು ಮತ್ತು ಅಂಗನವಾಡಿ ಕಟ್ಟಡಗಳನ್ನೂ ಸಹ ಇದೇ ರೀತಿಯಲ್ಲಿ ಆರ್.ಐ.ಡಿ.ಎಫ್-14 ಹಾಗೂ 15 ಯೋಜನೆಯಡಿ ಎಸ್.ಡಿ.ಎಂ.ಸಿ ಗೆ ವಹಿಸಲಾಗಿರುವ ಕಟ್ಟಡಗಳಿಗೆ ಕೂಡಲೇ ಅನುದಾನ ಬಿಡುಗಡೆ ಮಾಡಿ, ಅನುಷ್ಠಾನಗೊಳಿಸಲು ಸೂಚಿಸಲಾಯಿತು. ಕರ್ನಾಟಕ ಮೂಲ ಸೌಕರ್ಯಗಳ ಇಲಾಖೆಯವರು ಅನುಷ್ಠಾನ ಮಾಡಲು ಘಟಕವೆಚ್ಚ ಕಡಿಮೆಯಾಗಿದೆ ಎಂದು ತಿಳಿಸಿದ್ದು, ಈವರೆವಿಗೂ ಅನುಷ್ಠನವಾಗಿಲ್ಲದಿರುವುದರಿಂದ, ಕೂಡಲೇ ಅನುದಾನವನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ವರ್ಗಾಯಿಸಿ ಅನುಷ್ಠಾನಗೊಳಿಸಲು ಸೂಚಿಸಲಾಯಿತು.<br><br>ಸರ್ವಶಿಕ್ಷಣ ಅಭಿಯಾನದಡಿಯಲ್ಲಿ ಹೆಚ್ಚುವರಿ ಶಾಲಾ ಕಟ್ಟಡಗಳ ದುರಸ್ಥಿಗೆ ರೂ.1.5ಕೋಟಿ ಅನುದಾನ ನಿಗದಿಯಾಗಿರುತ್ತದೆ. ಕಟ್ಟಡ ಕಾಮಗಾರಿಗಳು ಬೇರೆ ಬೇರೆ ಯೋಜನೆಯಡಿಯಲ್ಲಿ ಅನುಷ್ಠಾನವಾಗಿರುವ ಬಗ್ಗೆ ದೃಢೀಕರಿಸಿಕೊಂಡು ಕಾಮಗಾರಿಗಳ ಪಟ್ಟಿಯನ್ನು ಸಿದ್ಧಪಡಿಸುವುದು ಸೂಕ್ತವಾಗಿರುತ್ತದೆ. ಆದ್ದರಿಂದ, ಈ ಬಗ್ಗೆ ಶಿಕ್ಷಣ ಸಂಯೋಜನಾಧಿಕಾರಿಗಳು, ಉಪ ನಿರ್ದೇಶಕರು, | |

<u>ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು</u>

**ಪ್ರತಿಯನ್ನು:**

1. ಶ್ರೀಮತಿ ಡಿ.ಜಿ.ಅಂಬಿಕ ರಾಮಣ್ಣ, ಅಧ್ಯಕ್ಷರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ.
2. ಶ್ರೀ ಲಕ್ಷ್ಮಣಗೌಡ, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ.
3. ಶ್ರೀಮತಿ ಭಾಗ್ಯ, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ.
4. ಶ್ರೀ ಪುರುಷೋತ್ತಮ, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ.
5. ಶ್ರೀಮತಿ ಸಿ.ಎನ್.ರತ್ನಮ್ಮ, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ.
6. ಶ್ರೀ ಎನ್.ಡಿ.ಕಿಶೋರ್, ಸದಸ್ಯರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ.
7. ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಆಪ್ತಶಾಖೆಗೆ ಮಾಹಿತಿಗಾಗಿ.
8. ಮಾನ್ಯ ಉಪಾಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಆಪ್ತಶಾಖೆಗೆ ಮಾಹಿತಿಗಾಗಿ.
9. ಜಿಲ್ಲಾ ಪಂಚಾಯಿತಿ ಎಲ್ಲಾ ಮಾನ್ಯ ಸದಸ್ಯರುಗಳಿಗೆ ಮಾಹಿತಿಗಾಗಿ.
10. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತ್, ಹಾಸನ ರವರ ಆಪ್ತಶಾಖೆಗೆ.
11. ಉಪ ಕಾರ್ಯದರ್ಶಿ(ಆಡಳಿತ), ಜಿಲಾ ಪಂಚಾಯಿತಿ, ಹಾಸನ.
12. ಉಪ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯಿತಿ, ಹಾಸನ.
13. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
14. ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
15. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
16. ಜಿಲ್ಲೆಯ ಎಲ್ಲಾ ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
17. ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಕಳುಹಿಸುತ್ತಾ, ಪೂರ್ಣ ಮಾಹಿತಿಯೊಂದಿಗೆ ಇಲಾಖಾ ಮುಖ್ಯಸ್ಥರು ಸಭೆಗೆ ಕಡ್ಡಾಯವಾಗಿ ಹಾಜರಾಗಲು ಸೂಚಿಸಿದೆ.
18. ಉಪನಿರ್ದೇಶಕರು, ಕರ್ನಾಟಕ ಮೂಲಭೂತ ಸೌಕರ್ಯಗಳ ಇಲಾಖೆ (ಭೂಸೇನಾ ನಿಗಮ), ಹಾಸನ.
19. ಕಛೇರಿ ಪ್ರತಿ.

# ಜಿಲ್ಲಾ ಪಂಚಾಯತ್ ಹಾಸನ

ಸಂಖ್ಯೆ:ಜಿಪಂಹಾ/ಆರ್ಥಿಕ/ಆಪ್ತಶಾಖೆ/ಸಭೆ-1/2012-13

ದಿನಾಂಕ: 06-11-2012

## ಸಭಾಹ್ವಾನ ಪತ್ರ

ಶ್ರೀಮತಿ ಡಿ.ಜಿ.ಅಂಬಿಕ ರಾಮಣ್ಣ, ಅಧ್ಯಕ್ಷರು, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ, ಇವರ ಅಧ್ಯಕ್ಷತೆಯಲ್ಲಿ **ದಿನಾಂಕ: 22-11-2012ರಂದು ಗುರುವಾರ ಪೂರ್ವಾಹ್ನ 11-30 ಗಂಟೆಗೆ** ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯನ್ನು ಹಾಸನ ಜಿಲ್ಲಾ ಪಂಚಾಯಿತಿ ಹೇಮಾವತಿ ಸಭಾಂಗಣದಲ್ಲಿ ಕರೆಯಲಾಗಿದೆ. ಸದರಿ ಸಭೆಗೆ ಮಾನ್ಯ ಸದಸ್ಯರುಗಳು ಹಾಜರಾಗಿ ಸಲಹೆ ಸಹಕಾರ ನೀಡಲು ಕೋರಲಾಗಿದೆ.

ಮುಖ್ಯ ಲೆಕ್ಕಾಧಿಕಾರಿ
ಹಾಗು ಸದಸ್ಯ ಕಾರ್ಯದರ್ಶಿ
ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ,
ಜಿಲ್ಲಾ ಪಂಚಾಯತ್, ಹಾಸನ.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ಏಪ್ರಿಲ್-2012 ರಿಂದ ಸೆಪ್ಟಂಬರ್-2012ರ ವರೆಗೆ ಸರ್ಕಾರದಿಂದ ಬಿಡುಗಡೆ ಆಗಿರುವ ಅನುದಾನದ ವೆಚ್ಚಗಳ ಕುರಿತು ಇಲಾಖಾವಾರು ಪರಿಶೀಲನೆ ಬಗ್ಗೆ.
2. ಏಪ್ರಿಲ್-2012 ರಿಂದ ಆಗಸ್ಟ್-2012ರ ಮಾಹೆಯ ವರೆಗಿನ ಮಾಸಿಕ ಲೆಕ್ಕಗಳ ಅನುಮೋದನೆ ಬಗ್ಗೆ.
3. 2013-14ನೇ ಸಾಲಿನ ಜಿಲ್ಲಾಪಂಚಾಯತ್ ಹಾಗು ಅಧೀನ ಇಲಾಖೆಗಳ ಆಯವ್ಯಯ ಅಂದಾಜು ಅಪೆಂಡಿಕ್ಸ್-ಬಿ. ಅನುಮೋದನೆ ಬಗ್ಗೆ.
4. ಅಂತರ ರಾಷ್ಟ್ರೀಯ ಮಟ್ಟದ ನಾಟಕೋತ್ಸವ ನಡೆಸುವ ಬಗ್ಗೆ.
5. ದಕ್ಷಿಣ ವಲಯ ಕ್ರೀಡಾ ಕೂಟ ನಡೆಸಲು ಜಿಲ್ಲಾಪಂಚಾಯತ್‌ನಿಂದ ಧನ ಸಹಾಯ ನೀಡುವ ಬಗ್ಗೆ.
6. ಅಂತರರಾಷ್ಟ್ರೀಯ ಕ್ರೀಡೆಯಲ್ಲಿ ಭಾಗವಹಿಸಲು ಧನ ಸಹಾಯ ಕೋರಿ ಮನವಿ.
7. ಮಾನ್ಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳ ಬಗ್ಗೆ ಚರ್ಚೆ.

-2)